# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ ಸಂಖ್ಯೆ 201 (ಹಳೆ ವಾರ್ಡ್ 166) ಉಮಾಮಹೇಶ್ವರ ವಾರ್ಡ್ ಕಛೇರಿ ಬೆಂಗಳೂರು

**ದಿನಾಂಕ: 04-02-2023 ರಂದು ಬೆಳಗ್ಗೆ 10:30 ಗಂಟೆಗೆ ವಾರ್ಡ್ ಸಂಖ್ಯೆ 201 (ಹಳೆ ವಾರ್ಡ್ 166) ಉಮಾಮಹೇಶ್ವರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:-***

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಪ್ರಕಾಶ. ಎನ್. ಎಸ್ – ಸಹಾಯಕ ಅಭಿಯಂತರರು (ವಾರ್ಡ್ ಸಂಖ್ಯೆ 166)
3. ಶ್ರೀ. ನವೀನ್ ಕುಮಾರ್. ಎಸ್ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ಕಿಯೋನಿಕ್ಸ್)
4. ಘನತ್ಯಾಜ್ಯ ವಿಲೇವಾರಿ ಸೂಪರ್‌ವೈಸರ್‌ಗಳು.
5. 7ನೇ ಬ್ಲಾಕ್ ಜಯನಗರ ಮತ್ತು ಬನಶಂಕರಿ 2ನೇ ಹಂತದ ನಿವಾಸಿಗಳ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು.

*********

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 201 (ಹಳೆ ವಾರ್ಡ್ 166) ಉಮಾಮಹೇಶ್ವರ ವಾರ್ಡ್‌ನ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಈ ಹಿಂದಿನ ಸಭೆಯಲ್ಲಿ ಕಾರ್ಯಗತಗೊಳ್ಳದ ಕೆಲಸಕಾರ್ಯಗಳನ್ನು ಅಧಿಕಾರಿಗಳು ನಿಗಧಿತ ಅವಧಿಯೊಳಗೆ ಕಡ್ಡಾಯವಾಗಿ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿ ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಗಂಭೀರವಾಗಿ ಪರಿಗಣಿಸುವಂತೆ ಸೂಚಿಸಲಾಯಿತು.

ಮುಂದುವರೆದು, ಈ ಕೆಳಕಂಡ ವಿಷಯಗಳ ಬಗ್ಗೆ ಚರ್ಚಿಸಲಾಯಿತು.

- ವಾರ್ಡ್ ವ್ಯಾಪ್ತಿಯಲ್ಲಿ ಜಲಮಂಡಳಿ ಮತ್ತು ಒಳಚರಂಡಿ ವಿಭಾಗ ರವರಿಂದ ಕಾಮಗಾರಿ ನಡೆಯುತ್ತಿದ್ದು ಸಾರ್ವಜನಿಕರ ಸಂಚಾರಕ್ಕೆ ತುಂಬಾ ಕಷ್ಟಕರವಾಗಿರುತ್ತದೆ. ಸದರಿ ಕಾಮಗಾರಿಯನ್ನು ಆದಷ್ಟು ವೇಗವಾಗಿ ಮುಗಿಸಿಕೊಡೊಲು ಸಾರ್ವಜನಿಕರು ಕೋರಿದರು.
- ಜಯನಗರ 7ನೇ ಬ್ಲಾಕ್‌ನ ಸರಸ್ವತಿ ಬ್ಯಾಂಕ್ ಹತ್ತಿರದ 3ನೇ ಅಡ್ಡರಸ್ತೆ ಮತ್ತು ಬನಶಂಕರಿ 2ನೇ ಹಂತದ 24ನೇ ಎ ಅಡ್ಡರಸ್ತೆ ಹಾಗೂ 5ನೇ ಎ ಮುಖ್ಯರಸ್ತೆಯಲ್ಲಿ ಕುಡಿಯುವ ನೀರಿನ ಪೈಪ್ ಲೀಕ್ ಆಗುತ್ತಿರುತ್ತದೆ. ಸದರಿ ಪೈಪ್ ಅನ್ನು ಸರಿಪಡಿಸಿಕೊಡಲು ಸಾರ್ವಜನಿಕರು ಕೋರಿದರು.

**ಕ್ರಮ: ಸಹಾಯಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ.**

**ಪು.ತಿ.ನೋ**

- ವಾರ್ಡ್ ವ್ಯಾಪ್ತಿಯಲ್ಲಿ ಸ್ವಚ್ಚತೆ ಕಾಪಾಡಲು ಒಂದು ಬಾರಿ ಸಾಮೂಹಿಕ ಸ್ವಚ್ಚತಾ ಕಾರ್ಯಕ್ರಮವನ್ನು ಮಾಡಲು ಸಾರ್ವಜನಿಕರು ಕೋರಿದರು.

**ಕ್ರಮ: ಸ.ಕಾ.ನಿ.ಅ (ಘನತ್ಯಾಜ್ಯ)**

- ವಾರ್ಡ್ ವ್ಯಾಪ್ತಿಯಲ್ಲಿರುವ ಸ್ಮಶಾನದ ಹತ್ತಿರ ಪೊಲೀಸ್ ಬೀಟ್ ಹಾಗೂ ಸಿಸಿ ಕ್ಯಾಮರಾಗಳನ್ನು ಅಳವಡಿಸಿಕೊಡುವಂತೆ ಸಾರ್ವಜನಿಕರು ಕೋರಿದರು.
- ವಾರ್ಡ್ ವ್ಯಾಪ್ತಿಯ ಕೆ.ಆರ್ ರಸ್ತೆಯಲ್ಲಿರುವ ಆರಾಧ್ಯ ಹೋಟೆಲ್‌ಗೆ ಬರುವ ಸಾರ್ವಜನಿಕರು ಹೋಟೆಲ್ ಮುಂಭಾಗದಲ್ಲಿ ವಾಹನಗಳನ್ನು ನಿಲ್ಲಿಸುತ್ತಿರುತ್ತಾರೆ. ಸದರಿ ವಾಹನಗಳ ನಿಲುಗಡೆಯಿಂದ ಸಂಚಾರ ದಟ್ಟನೆಯುಂಟಾಗುತ್ತಿರುತ್ತದೆ. ಆದ್ದರಿಂದ ಸದರಿ ಸ್ಥಳದಲ್ಲಿ ವಾಹನ ನಿಲುಗಡೆಯನ್ನು ನಿಲ್ಲಿಸಲು ಸಾರ್ವಜನಿಕರು ಕೋರಿದರು.
- ವಾರ್ಡ್ ವ್ಯಾಪ್ತಿಯ ಜೆಎಸ್‌ಎಸ್ ಸರ್ಕಲ್ ನಿಂದ 1ನೇ ಎ ಮುಖ್ಯರಸ್ತೆ ವರೆಗೆ ಹೋಗುವ ರಸ್ತೆಯಲ್ಲಿ ಏಕಮುಖ ಸಂಚಾರವನ್ನು ಮಾಡಲಾಗಿರುತ್ತದೆ. ಇದರಿಂದ ಸಾರ್ವಜನಿಕರ ಓಡಾಟಕ್ಕೆ ತೊಂದರೆಯಾಗುತ್ತಿರುತ್ತದೆ. ಆದ್ದರಿಂದ ಸದರಿ ಏಕಮುಖ ಸಂಚಾರವನ್ನು ತೆರವುಗೊಳಿಸಿ ಸಾರ್ವಜನಿಕರ ಸುಗಮ ಓಡಾಟಕ್ಕೆ ಅನುವು ಮಾಡಿಕೊಡಬೇಕೆಂದು ಸಾರ್ವಜನಿಕರು ಕೋರಿದರು.

**ಕ್ರಮ: ಬನಶಂಕರಿ ಪೊಲೀಸ್**

- ವಾರ್ಡ್ ವ್ಯಾಪ್ತಿಯ ಕೆ.ಆರ್ ರಸ್ತೆ ಮತ್ತು ಕನಕಪುರ ರಸ್ತೆಗಳಲ್ಲಿ ತೊಂದರೆಯುಂಟಾಗಿದ್ದು ಸದರಿ ತೊಂದರೆಗಳನ್ನು ನಿವಾರಿಸಲು ರಸ್ತೆ ಮತ್ತು ಮೂಲಭೂತ ಸೌಕರ್ಯ, ದಕ್ಷಿಣ ವಿಭಾಗದಿಂದ ಅಧಿಕಾರಿಗಳನ್ನು ಕರೆಸಿ ತಪಾಸಣೆ ನಡೆಸಬೇಕೆಂದು ಸಾರ್ವಜನಿಕರು ಕೋರಿದರು.

**ಕ್ರಮ: ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ.**

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ನೋಡೆಲ್ ಅಧಿಕಾರಿ
ವಾರ್ಡ್ ಸಂಖ್ಯೆ 201